# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ :- ಕರ್ನಾಟಕ ರಾಜ್ಯದಲ್ಲಿ Local Government Directory (LGD) ನ್ನು ಅನುಷ್ಠಾನಗೊಳಿಸಲು ಸಮಿತಿಯನ್ನು ರಚಿಸುವ ಬಗ್ಗೆ.

**ಓದಲಾಗಿದೆ.**

1) ಜಂಟಿ ಕಾರ್ಯದರ್ಶಿಗಳು, ಪಂಚಾಯತ್ ರಾಜ್ ಮಂತ್ರಾಲಯ, ಭಾರತ ಸರ್ಕಾರ ಇವರ ಅರೆ ಸರ್ಕಾರಿ ಪತ್ರದ ಸಂಖ್ಯೆ: D.O.No. N-19011(50)/3/2016-e-Panchayat, ದಿನಾಂಕ: 19.07.2017

2) ಕಡತ ಸಂಖ್ಯೆ:ಗ್ರಾಅಪ/39/ಗ.ಕೋಶ/2017 ರ ಟಿಪ್ಪಣಿ ಕಂಡಿಕೆ ಸಂ: (20) ರಲ್ಲಿ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ರವರು ಅನುಮೋದಿಸಿದಂತೆ.

*******

**ಪ್ರಸ್ತಾವನೆ:**

ಪಂಚಾಯತ್ ರಾಜ್ ಮಂತ್ರಾಲಯ, ಭಾರತ ಸರ್ಕಾರದ ವತಿಯಿಂದ ಎಲ್ಲಾ ಗ್ರಾಮೀಣ ಮತ್ತು ನಗರ ಸ್ಥಳೀಯ ಸಂಸ್ಥೆಗಳು ಹಾಗೂ ಸ್ಥಳೀಯ ಸಂಸ್ಥೆಗಳ ಪ್ರತಿನಿಧಿಗಳ ವಿವರಗಳನ್ನು, ಪ್ರತಿಯೊಂದು ಕಂದಾಯ/ಭೂ ಪ್ರದೇಶದ ಘಟಕಗಳನ್ನು Panchayat Enterprise suite ನಲ್ಲಿ ಒಂದಾದ Local Government Directory (LGD) ನಲ್ಲಿ ಅಳವಡಿಸಲಾಗಿದ್ದು, ಅವುಗಳಿಗೆ ವಿಶಿಷ್ಟ ಸಂಕೇತ (Unique Code) ಗಳನ್ನು ನಿಯೋಜಿಸಲಾಗುತ್ತಿದೆ ಹಾಗೂ ಹೊಸದಾಗಿ ರೂಪಗೊಂಡ ಸ್ಥಳೀಯ ಸಂಸ್ಥೆಗಳ ವಿವರಗಳನ್ನು ಸಾರ್ವಜನಿಕರ ಮಾಹಿತಿಗಾಗಿ ಒದಗಿಸಲು ರಾಜ್ಯ ಮಟ್ಟದ ಇಲಾಖೆಗಳಿಗೆ ಅವಕಾಶ ಕಲ್ಪಿಸಲಾಗಿದೆ. ಮಂತ್ರಿ ಮಂಡಲದ ಸಚಿವಾಲಯ, ನವದೆಹಲಿಯ ಡಿಬಿಟಿ ಅಭಿಯಾನದವರು, Local Government Directory ನ್ನು ಪ್ರಮಾಣಿತ ಸ್ಥಳ ಸಂಕೇತ ಕೋಶವಾಗಿ (Standard Location Code Directory) ಮಾಡಲು ತೀರ್ಮಾನಿಸಿರುತ್ತಾರೆ ಹಾಗೂ ರಾಜ್ಯ ಸರ್ಕಾರದ ಸಚಿವಾಲಯ ಹಾಗೂ ವಿವಿಧ ಇಲಾಖೆಗಳಲ್ಲಿ LGD Codes ಬಳಕೆ/ಅಳವಡಿಕೆ ಅನುಷ್ಠಾನಕ್ಕಾಗಿ ಪಂಚಾಯತ್ ರಾಜ್ ಮಂತ್ರಾಲಯವನ್ನು ನೋಡಲ್ ಸಚಿವಾಲಯವೆಂದು ನಿರ್ಧರಿಸಲಾಗಿರುತ್ತದೆ. ಪಂಚಾಯತ್ ರಾಜ್ ಮಂತ್ರಾಲಯವು ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ಕಂದಾಯ ಇಲಾಖೆ ಮತ್ತು ನಗರಾಭಿವೃದ್ಧಿ ಇಲಾಖೆಗಳು ಕಡ್ಡಾಯವಾಗಿ Local Government Directory (LGD) ನ್ನು ಬಳಸಲು ಹಾಗೂ State Specific Application ಗಳ ಕೋಡ್‌ನೊಂದಿಗೆ ನಕ್ಷೀಕರಣ ಮಾಡಲು ಮೇಲ್ಕಂಡ ಮೂರೂ ಇಲಾಖೆಯಿಂದ ನೋಡಲ್ ಅಧಿಕಾರಿಯನ್ನು ನೇಮಿಸಲು ತಿಳಿಸಿರುತ್ತಾರೆ.

ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯಿಂದ ಈಗಾಗಲೇ ರಾಜ್ಯದ ಎಲ್ಲಾ ಗ್ರಾಮಗಳ, ಹೊಸದಾಗಿ ರಚಿಸಲಾದ ಪಂಚಾಯತಿಗಳ ವಿವರಗಳನ್ನು ಹಾಗೂ ಗ್ರಾಮ ಪಂಚಾಯತಿ ವಿಂಗಡನೆ ಮತ್ತು ಗ್ರಾಮೀಣ ಸ್ಥಳೀಯ ಸಂಸ್ಥೆಗಳ ಮಾಹಿತಿಯನ್ನು Local Government Directory (LGD) ನಲ್ಲಿ ಅಳವಡಿಸಲಾಗಿದೆ ಹಾಗೂ ಇಲಾಖೆಯಿಂದ ನಿರ್ದೇಶಕರು, ಇ-ಆಡಳಿತ ಶಾಖೆ ಇವರನ್ನು ನೋಡಲ್ ಅಧಿಕಾರಿಯನ್ನಾಗಿ ನೇಮಿಸಲಾಗಿರುತ್ತದೆ.

ಮೇಲೆ ಓದಲಾದ (1)ರ ಪತ್ರದಲ್ಲಿ Local Government Directory (LGD) ಪ್ರಗತಿ ಪರಿಶೀಲನೆ ಮತ್ತು ಮೇಲ್ವಿಚಾರಣೆಗಾಗಿ ಮುಖ್ಯ ಕಾರ್ಯದರ್ಶಿ/ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿಗಳು, ಪಂಚಾಯತ್ ರಾಜ್ ಇವರ ನೇತೃತ್ವದಲ್ಲಿ ಒಂದು ಸಮಿತಿಯನ್ನು ರಚನೆ ಮಾಡಲು ಪಂಚಾಯತ್ ರಾಜ್ ಮಂತ್ರಾಲಯ, ನವದೆಹಲಿಯವರು ತಿಳಿಸಿರುತ್ತಾರೆ.

ಅದರಂತೆ ಮೇಲೆ ಓದಲಾದ (2) ರ ಟಿಪ್ಪಣಿ ಕಂಡಿಕೆಯಲ್ಲಿ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಮಾನ್ಯ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆರವರ ನೇತೃತ್ವದಲ್ಲಿ ಮಾನ್ಯ ಕಾರ್ಯದರ್ಶಿಗಳು, ಕಂದಾಯ ಇಲಾಖೆ ಹಾಗೂ ಮಾನ್ಯ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ ಮತ್ತು ಇಲಾಖೆಗಳಿಂದ ನೇಮಿಸಲ್ಪಟ್ಟ ನೋಡಲ್ ಅಧಿಕಾರಿಗಳನ್ನೊಳಗೊಂಡಂತೆ ಒಂದು ಸಮಿತಿಯನ್ನು ರಚಿಸಲು ಅನುಮೋದಿಸಿರುತ್ತಾರೆ.

ಅದರಂತೆ, ಕರ್ನಾಟಕ ರಾಜ್ಯದಲ್ಲಿ Local Government Directory (LGD) ನ್ನು ಅನುಷ್ಠಾನಗೊಳಿಸಲು ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯಿಂದ ಸಮಿತಿಯನ್ನು ರಚಿಸುವ ಬಗ್ಗೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/39/ಗ.ಕೋಶ/2017 ಬೆಂಗಳೂರು, ದಿನಾಂಕ:28/11/2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನಲೆಯಲ್ಲಿ ಕರ್ನಾಟಕ ರಾಜ್ಯದಲ್ಲಿ Local Government Directory (LGD) ನ್ನು ಅನುಷ್ಠಾನಗೊಳಿಸಲು ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯಿಂದ ಸಮಿತಿಯನ್ನು ಈ ಕೆಳಕಂಡಂತೆ ರಚಿಸಿ ಆದೇಶಿಸಿದೆ.

| ಕ್ರಮ ಸಂಖ್ಯೆ | ಹುದ್ದೆ ಹಾಗೂ ಇಲಾಖೆ | ಸಮಿತಿಯ ಸ್ಥಾನ |
|---|---|---|
| 01. | ಮಾನ್ಯ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ಕರ್ನಾಟಕ ಸರ್ಕಾರ | ಅಧ್ಯಕ್ಷರು |
| 02. | ಮಾನ್ಯ ಕಾರ್ಯದರ್ಶಿಗಳು, ಕಂದಾಯ ಇಲಾಖೆ, ಕರ್ನಾಟಕ ಸರ್ಕಾರ | ಸದಸ್ಯರು |
| 03 | ಮಾನ್ಯ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ, ಕರ್ನಾಟಕ ಸರ್ಕಾರ | ಸದಸ್ಯರು |
| 04 | ನೋಡಲ್ ಅಧಿಕಾರಿಗಳು, ಕಂದಾಯ ಇಲಾಖೆ | ಸದಸ್ಯರು |
| 05 | ನೋಡಲ್ ಅಧಿಕಾರಿಗಳು, ನಗರಾಭಿವೃದ್ಧಿ ಇಲಾಖೆ | ಸದಸ್ಯರು |
| 06 | ನೋಡಲ್ ಅಧಿಕಾರಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ | ಸದಸ್ಯ ಕಾರ್ಯದರ್ಶಿ |

ಕರ್ನಾಟಕ ರಾಜ್ಯಪಾಲರ ಆದೇಶನುಸಾರ
ಮತ್ತು ಅವರ ಹೆಸರಿನಲ್ಲಿ

28/11/17

(ಕೆ.ಯಾಲಕ್ಕಿಗೌಡ)
ನಿರ್ದೇಶಕರು(ಇ-ಆಡಳಿತ) (ಪ್ರ) ಹಾಗೂ
ಪ/ನಿ ಸರ್ಕಾರದ ಜಂಟಿ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

**ಇವರಿಗೆ:**

1. ಮಾನ್ಯ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ಕರ್ನಾಟಕ ಸರ್ಕಾರ.
2. ಮಾನ್ಯ ಕಾರ್ಯದರ್ಶಿಗಳು, ಕಂದಾಯ ಇಲಾಖೆ, ಕರ್ನಾಟಕ ಸರ್ಕಾರ.
3. ಮಾನ್ಯ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ, ಕರ್ನಾಟಕ ಸರ್ಕಾರ.
4. ನೋಡಲ್ ಅಧಿಕಾರಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
5. ನೋಡಲ್ ಅಧಿಕಾರಿಗಳು, ಕಂದಾಯ ಇಲಾಖೆ.
6. ನೋಡಲ್ ಅಧಿಕಾರಿಗಳು, ನಗರಾಭಿವೃದ್ಧಿ ಇಲಾಖೆ.

**ಪ್ರತಿಯನ್ನು ಮಾಹಿತಿಗಾಗಿ:**

ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್), ಇವರ ಆಪ್ತ ಕಾರ್ಯದರ್ಶಿಗಳಿಗೆ, ಗ್ರಾಅಪ ಇಲಾಖೆ, ಬೆಂಗಳೂರು.

2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ, ವಿಕಾಸ ಸೌಧ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.